## ಕರ್ನಾಟಕ ಸರ್ಕಾರದ ನಡವಳಿಗಳು

**ವಿಷಯ:** ಚಿತ್ರದುರ್ಗ ಜಿಲ್ಲೆ, ಚಿತ್ರದುರ್ಗ ತಾಲ್ಲೂಕಿನ ಸಿರಿಗೆರೆ, ಭರಮಸಾಗರ ಹಾಗೂ ಮಾರ್ಗಮಧ್ಯದ 45 ಗ್ರಾಮಗಳಿಗೆ ಶಾಂತಿಸಾಗರ ಜಲಾಶಯದಿಂದ ಕುಡಿಯುವ ನೀರು ಪೂರೈಕೆ ಮಾಡುವ ಯೋಜನೆಗೆ ಆಡಳಿತಾತ್ಮಕ ಅನುಮೋದನೆ ನೀಡುವ ಕುರಿತು.

**ಓದಲಾಗಿದೆ:**
1. ಮುಖ್ಯ ಇಂಜಿನಿಯರ್, PRED ಇವರ ಪತ್ರ ಸಂ:ಮುಇಂ/ ಪಂರಾಇಂಇ/ತ್ವಗ್ರಾನೀಸ-1/ತಾಂಸ-1/ಸಇಂ-2/ಸಿರಿಗೆರೆ/2012-13/1636 ದಿನಾಂಕ:01.06.2012.
2. KUWSDB ಪತ್ರ ಸಂ:ಕಜಮಂ/TEC/CE/TA-9/AE-5/SRG-BRM/2012-13/489 ದಿನಾಂಕ:16.05.2012.
3. ಸರ್ಕಾರದ ಪತ್ರ ಸಂ: ಗ್ರಾಅಪ 63 ಗ್ರಾನೀಸ (5) 10 ದಿನಾಂಕ:18.06.2012.

**ಪೀಠಿಕೆ:**

ಚಿತ್ರದುರ್ಗ ಜಿಲ್ಲೆ, ಚಿತ್ರದುರ್ಗ ತಾಲ್ಲೂಕಿನ ಸಿರಿಗೆರೆ, ಭರಮಸಾಗರ ಹಾಗೂ ಮಾರ್ಗಮಧ್ಯದ 45 ಗ್ರಾಮಗಳಿಗೆ ಶಾಂತಿಸಾಗರ ಜಲಾಶಯದಿಂದ ಕುಡಿಯುವ ನೀರು ಪೂರೈಕೆ ಮಾಡುವ ರೂ.6885.00 ಲಕ್ಷ ಅಂದಾಜಿನ ಯೋಜನೆ ಕಾಮಗಾರಿಯನ್ನು ಕರ್ನಾಟಕ ನಗರ ನೀರು ಸರಬರಾಜು ಮತ್ತು ಒಳಚರಂಡಿ ಮಂಡಳಿ ಮುಖೇನ ಅನುಷ್ಠಾನಗೊಳಿಸಲು ಅನುಮೋದನೆ ನೀಡುವಂತೆ ಮೇಲೆ (1)ರಲ್ಲಿ ಓದಲಾದ ಪತ್ರದಲ್ಲಿ CE/PREDರವರು ಕೋರಿರುತ್ತಾರೆ. ಅಂತೆಯೇ, ಈ ಯೋಜನೆ ಅನುಷ್ಠಾನಕ್ಕೆ SLSSC ಸಭೆ ದಿ:11.05.2011ರಲ್ಲಿ ಅನುಮೋದನೆ ಪಡೆಯಲಾಗಿದೆ. ಉದ್ದೇಶಿತ ಯೋಜನೆಯನ್ನು KUWSDB ವತಿಯಿಂದ ಅನುಷ್ಠಾನಗೊಳಿಸಲು ಪೂರ್ವ ಸಿದ್ಧತೆ ಮಾಡಿಕೊಳ್ಳಲು ಸರ್ಕಾರದ ತಾತ್ವಿಕ ಒಪ್ಪಿಗೆಯನ್ನು ಮೇಲೆ ಉಲ್ಲೇಖ(3)ರಲ್ಲಿ ಓದಲಾದ ದಿ:18.06.2012ರ ಪತ್ರದಲ್ಲಿ ನೀಡಲಾಗಿದೆ. ಈಗ ಸದರಿ ರೂ.6885.00 ಲಕ್ಷ ಅಂದಾಜು ವೆಚ್ಚದ ಯೋಜನೆ ಕಾಮಗಾರಿಯನ್ನು ಅನುಷ್ಠಾನಗೊಳಿಸಲು ಆಡಳಿತಾತ್ಮಕ ಅನುಮೋದನೆ ನೀಡಲು ನಿರ್ಧರಿಸಿದೆ. ಆದ್ದರಿಂದ ಈ ಆದೇಶ.

**ಸರ್ಕಾರದ ಆದೇಶ ಸಂಖ್ಯೆ: ಗ್ರಾಅಪ 63 ಗ್ರಾನೀಸ(5) 2010 ಬೆಂಗಳೂರು, ದಿನಾಂಕ:13.08.2012.**

ಪೀಠಿಕೆಯಲ್ಲಿನ ಅಂಶಗಳನ್ನು ಪರಿಶೀಲಿಸಿ, ಚಿತ್ರದುರ್ಗ ಜಿಲ್ಲೆ, ಚಿತ್ರದುರ್ಗ ತಾಲ್ಲೂಕಿನ ಸಿರಿಗೆರೆ, ಭರಮಸಾಗರ ಹಾಗೂ ಮಾರ್ಗಮಧ್ಯದ 45 ಗ್ರಾಮಗಳಿಗೆ ಶಾಂತಿಸಾಗರ ಜಲಾಶಯದಿಂದ ಕುಡಿಯುವ ನೀರು ಪೂರೈಕೆ ಮಾಡುವ **ರೂ.6885.00 ಲಕ್ಷ (ಆರು ಸಾವಿರದ ಎಂಟುನೂರ ಎಂಭತ್ತೈದು ಲಕ್ಷ ರೂಪಾಯಿಗಳು ಮಾತ್ರ)** ಅಂದಾಜು ಮೊತ್ತದ ಯೋಜನೆಯ (ಅಂದಾಜು ಘೋಷ್ವಾರೆ ಲಗತ್ತಿಸಿದೆ) ಕಾಮಗಾರಿಯನ್ನು KUWSDB ಮುಖೇನ ಅನುಷ್ಠಾನಗೊಳಿಸುವ ಯೋಜನೆಗೆ ಆಡಳಿತಾತ್ಮಕ ಅನುಮೋದನೆ ನೀಡಲು ಸರ್ಕಾರವು ಹರ್ಷಿಸುತ್ತದೆ.

ಈ ಯೋಜನೆಯ ಪ್ರಗತಿ ಮತ್ತು ಬೇಡಿಕೆ ಆಧರಿಸಿ ಅಗತ್ಯವಿರುವ ಅನುದಾನವನ್ನು ಒದಗಿಸಲಾಗುವುದು. ಪ್ರಸಕ್ತ ಸಾಲಿಗೆ ಅಗತ್ಯವಿರುವ ಅನುದಾನದ ಬೇಡಿಕೆಯನ್ನು ಚಿತ್ರದುರ್ಗ ಜಿಲ್ಲಾ ಪಂಚಾಯತಿಯು KUWSDBಯೊಂದಿಗೆ ಸಮಾಲೋಚಿಸಿ CE/PRED ಮುಖೇನ ಜಾಗ್ರತೆಯಾಗಿ ಸರ್ಕಾರಕ್ಕೆ ಸಲ್ಲಿಸತಕ್ಕದ್ದು.

ಅನುಮೋದನೆಯಾದ ಅಂದಾಜು ವೆಚ್ಚದಲ್ಲಿ ಹೆಚ್ಚಳವಾಗದಂತೆ ಮುಂಜಾಗ್ರತಾ ಕ್ರಮವಹಿಸಿ, ಕಾಲಮಿತಿಯೊಳಗೆ ಗರಿಷ್ಠ ಡಿಸೆಂಬರ್-2013ರೊಳಗೆ ಯೋಜನೆಯನ್ನು ಅನುಷ್ಠಾನಗೊಳಿಸಿ ಕಾರ್ಯಗತಗೊಳಿಸತಕ್ಕದ್ದು. ಈ ಯೋಜನೆಯ ಆರ್ಥಿಕ ಮತ್ತು ಭೌತಿಕ ಪ್ರಗತಿಯನ್ನು IMISನಲ್ಲಿ ದಾಖಲಿಸಲು ಚಿತ್ರದುರ್ಗ ಜಿಲ್ಲಾ ಪಂಚಾಯತ್ ಕ್ರಮವಹಿಸತಕ್ಕದ್ದು.

2. ಈ ಆದೇಶವನ್ನು ಆರ್ಥಿಕ ಇಲಾಖೆಯ ಸಹಮತಿ ಸಂಖ್ಯೆ:ಆಇ 450 ವೆಚ್ಚ 06/2010 ದಿ:02.04.2011 ಮತ್ತು ಯೋಜನಾ ಇಲಾಖೆಯ ಸಹಮತಿ ಸಂಖ್ಯೆ:ಯೋಇ 19 ಜಿಯೋವಿ 2012 ದಿ:12.03.2012 ಹಾಗೂ ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಇಲಾಖೆ IFA ರವರು ಯೋಜನೆಗಳ ಮುಂದುವರಿಕೆಗೆ ಹೊರಡಿಸಿರುವ ಆದೇಶ ಸಂಖ್ಯೆ:ಗ್ರಾಅಪ 13 ಆಂಅಸ 2012 ದಿ:02.04.2012ರನ್ವಯ ಹೊರಡಿಸಲಾಗಿದೆ.

ಕರ್ನಾಟಕ ರಾಜ್ಯಪಾಲರ ಆದೇಶಾನುಸಾರ
ಮತ್ತು ಅವರ ಹೆಸರಿನಲ್ಲಿ

(ರಾಮಕೃಷ್ಣ)
ಸರ್ಕಾರದ ಉಪ ಕಾರ್ಯದರ್ಶಿ (ಗ್ರಾನೀಸ)
ಗ್ರಾಮೀಣಾಭಿವೃದ್ಧಿ ಮತ್ತು ಪಂ.ರಾಜ್ ಇಲಾಖೆ

**ಪ್ರತಿಗಳು:**

1. ಮಹಾಲೇಖಪಾಲರು (ಲೆಕ್ಕಪತ್ರ) ಕರ್ನಾಟಕ, ಬೆಂಗಳೂರು.
2. ಮಹಾಲೇಖಪಾಲರು (ಎಯು–1) ಕರ್ನಾಟಕ, ಬೆಂಗಳೂರು.
3. ಮಹಾಲೇಖಪಾಲರು (ಎಯು–2) ಕರ್ನಾಟಕ, ಬೆಂಗಳೂರು.
4. ಉಪ ಮಹಾಲೇಖಪಾಲರು, ಮಹಾಲೇಖಪಾಲರು(ಎಯು–1)ರವರ ಶಾಖಾ ಕಛೇರಿ, ಕಾಲೇಜು ರಸ್ತೆ, ಧಾರವಾಡ.
5. ಮಾನ್ಯ ಗ್ರಾಮೀಣಾಭಿವೃದ್ಧಿ ಮತ್ತು ಪಂ.ರಾಜ್ ಸಚಿವರ ಆಪ್ತ ಕಾರ್ಯದರ್ಶಿಗಳು, ವಿಧಾನಸೌಧ, ಬೆಂಗಳೂರು–1.
6. ಸರ್ಕಾರದ ಅಪರ ಮುಖ್ಯ ಕಾರ್ಯದರ್ಶಿಗಳು ಹಾಗೂ ಅಭಿವೃದ್ಧಿ ಆಯುಕ್ತರ ಆಪ್ತ ಕಾರ್ಯದರ್ಶಿಗಳು, ವಿಧಾನಸೌಧ ಬೆಂ.
7. ಸರ್ಕಾರದ ಪ್ರಧಾನ ಕಾರ್ಯದರ್ಶಿಗಳು, ಆರ್ಥಿಕ ಇಲಾಖೆ ಇವರ ಆಪ್ತ ಕಾರ್ಯದರ್ಶಿಗಳು, ವಿಧಾನಸೌಧ, ಬೆಂಗಳೂರು.
8. ಸರ್ಕಾರದ ಪ್ರಧಾನ ಕಾರ್ಯದರ್ಶಿಗಳು, ಯೋಜನಾ ಇಲಾಖೆ ಇವರ ಆಪ್ತ ಕಾರ್ಯದರ್ಶಿಗಳು, ಬಹುಮಹಡಿಗಳ ಕಟ್ಟಡ, ಬೆಂ.
9. ವಿಶೇಷಾಧಿಕಾರಿಗಳು(ಜಿಪಂ)ಹಾಗೂ ಸರ್ಕಾರದ ಪದನಿಮಿತ್ತ ಉಪಕಾರ್ಯದರ್ಶಿಗಳು,ಆರ್ಥಿಕ ಇಲಾಖೆ, ವಿಧಾನಸೌಧ ಬೆಂ.
10. ಸರ್ಕಾರದ ಅಧೀನ ಕಾರ್ಯದರ್ಶಿ, ವೆಚ್ಚ (6) (ಜಿಪಂ) ಆರ್ಥಿಕ ಇಲಾಖೆ, ವಿಧಾನಸೌಧ, ಬೆಂಗಳೂರು.
11. ವ್ಯವಸ್ಥಾಪಕ ನಿರ್ದೇಶಕರು, ಕರ್ನಾಟಕ ನಗರ ನೀರು ಸರಬರಾಜು ಮತ್ತು ಒಳಚರಂಡಿ ಮಂಡಳಿ, ನಂ.5 ಮತ್ತು 6, ಜಲ ಭವನ, ಬಿ.ಟಿ.ಎಂ.ಲೇಔಟ್, 1ನೇ ಘಟ್ಟ, 1ನೇ ಹಂತ, ಬನ್ನೇರುಘಟ್ಟ ಮುಖ್ಯ ರಸ್ತೆ, ಬೆಂಗಳೂರು–560029.
12. ಮುಖ್ಯ ಇಂಜಿನಿಯರ್, ಪಂಚಾಯತ್‌ರಾಜ್ ಇಂಜಿನಿಯರಿಂಗ್ ಇಲಾಖೆ, ಕರ್ನಾಟಕ ಕೊಳಚೆ ನಿರ್ಮೂಲನಾ ಮಂಡಳಿ, ಸಂಕೀರ್ಣ,ನಂ55, 4ನೇ ಮಹಡಿ, ಅಭಯ ಕಾಂಪ್ಲೆಕ್ಸ್, ರಿಸಲ್ದಾರ್ ರಸ್ತೆ, ಶೇಷಾದ್ರಿಪುರಂ, ಬೆಂಗಳೂರು.–20.
13. ಅಧ್ಯಕ್ಷರು, ಜಿಲ್ಲಾ ಪಂಚಾಯತ್, **ಚಿತ್ರದುರ್ಗ**.
14. ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿಗಳು/ ಮುಖ್ಯ ಲೆಕ್ಕಾಧಿಕಾರಿಗಳು, ಜಿಲ್ಲಾ ಪಂಚಾಯತ್, **ಚಿತ್ರದುರ್ಗ**.
15. ಅಧೀಕ್ಷಕ ಅಭಿಯಂತರರು ಪಂಚಾಯತ್ ರಾಜ್ ಇಂಜಿನಿಯರಿಂಗ್ ವೃತ್ತ ಕಛೇರಿ, **ದಾವಣಗೆರೆ**.
16. ಮುಖ್ಯ ಲೆಕ್ಕಾಧಿಕಾರಿಗಳು, ಮುಖ್ಯ ಇಂಜಿನಿಯರ್‌ರ ಕಛೇರಿ, PRED, ಬೆಂಗಳೂರು–20.
17. ನಿರ್ದೇಶಕರು, ಶ್ರೀ ಅಬ್ದುಲ್ ನಜೀರ್ ಸಾಬ್‌ರವರ ಗ್ರಾಮೀಣಾಭಿವೃದ್ಧಿ ರಾಜ್ಯ ಸಂಸ್ಥೆ, ಲಲಿತ್ ಮಹಲ್ ರಸ್ತೆ, ಮೈಸೂರು.
18. ಗ್ರಾಮೀಣಾಭಿವೃದ್ಧಿ ಮತ್ತು ಪಂ.ರಾಜ್ ಇಲಾಖೆಯ ಸರ್ಕಾರದ ಪ್ರಧಾನ ಕಾರ್ಯದರ್ಶಿಗಳು/ ಕಾರ್ಯದರ್ಶಿ (ಪಂ.ರಾಜ್) ಇವರ ಆಪ್ತ ಕಾರ್ಯದರ್ಶಿಗಳು.
19. ನಿರ್ದೇಶಕರು KRWSSA ಮತ್ತು ಪದನಿಮಿತ್ತ ಸರ್ಕಾರದ ಜಂಟಿ ಕಾರ್ಯದರ್ಶಿಗಳು/ ಅಪರ ನಿರ್ದೇಶಕರು, (ಆರ್ಥಿಕ) KRWSSA/SWSM/ ಆಂತರಿಕ ಆರ್ಥಿಕ ಸಲಹೆಗಾರರು, RDPR ಇಲಾಖೆ, ಇವರುಗಳ ಆಪ್ತ ಸಹಾಯಕರು.
20. ಮ್ಯಾನೇಜರ್ ಸಿಂಡಿಕೇಟ್ ಬ್ಯಾಂಕ್, BWSSB Branch, ರಾಜಧೂತ್ ಕಾಂಪ್ಲೆಕ್ಸ್, ಅವೆನ್ಯೂರಸ್ತೆ, ಬೆಂಗಳೂರು.
21. ಮುಖ್ಯ ಸಂಪಾದಕರು ಮತ್ತು ಸಂಪರ್ಕಾಧಿಕಾರಿ "ಕರ್ನಾಟಕ ವಿಕಾಸ" ಗ್ರಾಅಪಂ.ರಾಜ್ ಇಲಾಖೆ, ಬೆಂಗಳೂರು.
22. ಶಾಖಾಧಿಕಾರಿ, ರವಾನೆ ಮತ್ತು ಸ್ವೀಕೃತಿ ಶಾಖೆ, ಗ್ರಾಅಪಂರಾ ಇಲಾಖೆ(ವಾರದ ಗೆಜೆಟ್‌ನಲ್ಲಿ ಪ್ರಕಟಿಸಲು 5ಪ್ರತಿಗಳು)
23. ರಾಜ್ಯ ಪತ್ರಾಗಾರ ಇಲಾಖೆ(ಬಿಡಿ ಪ್ರತಿ ಶಾಖೆ)
24. ಗ್ರಾ.ಅ.ಪಂ.ರಾಜ್ ಇಲಾಖೆ ಮಾಹಿತಿ ಕೇಂದ್ರ–10ಪ್ರತಿಗಳು.
25. ಶಾಖಾ ರಕ್ಷಾ ಕಡತ/ಹೆಚ್ಚುವರಿ ಪ್ರತಿಗಳು.